Akashvani : Bangalore
National Bulletins In Kannada
13.09.2025 : 1.10 PM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
13.09.2025 : 1.10 PM

ಮುಖ್ಯಾಂಶಗಳು

೧. ಮಿಚೋರಾಂನಲ್ಲಿ ೯ ಸಾವಿರ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ

೨. ಕರ್ನಾಟಕದ ಹಾಸನದಲ್ಲಿ ಭೀಕರ ರಸ್ತೆ ಅಪಘಾತ; ೯ ಸಾವು; ಪ್ರಧಾನಿ, ಮುಖ್ಯಮಂತ್ರಿಯಿಂದ ಪರಿಹಾರ ಘೋಷಣೆ

೩. ನೇಪಾಳದಲ್ಲಿ ಹೊಸ ಮಧ್ಯಂತರ ಸರ್ಕಾರ ರಚನೆ; ಭಾರತ ಸ್ವಾಗತ

೪. ಹಾಂಕಾಂಗ್ ಸೂಪರ್ ಓಪನ್ ಬ್ಯಾಡ್ಮಿಂಟನ್ : ಫೈನಲ್‌ಗೆ ಸಾತ್ವಿಕ್-ಚಿರಾಗ್ ಜೋಡಿ ಮುನ್ನಡೆ

><><><><><><><

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಮಿಜೋರಾಂನ ಐಜ್ವಾಲ್‌ನಲ್ಲಿ ೯ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ವರ್ಚುವಲ್ ಮೂಲಕ ಶಂಕುಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಿದರು. ಈ ಯೋಜನೆಗಳು ರೈಲ್ವೆ, ರಸ್ತೆ ಮಾರ್ಗಗಳು, ಇಂಧನ, ಕ್ರೀಡೆ ಸೇರಿದಂತೆ ಅನೇಕ ಕ್ಷೇತ್ರಗಳಿಗೆ ಸಂಬಂಧಿಸಿದ್ದಾಗಿವೆ.ಮಿಜೋರಾಂ ರಾಜಧಾನಿಯನ್ನು ಭಾರತೀಯ ರೈಲ್ವೆ ಜಾಲಕ್ಕೆ ಸಂಪರ್ಕಿಸುವ ೮ ಸಾವಿರ ಕೋಟಿ ರೂಪಾಯಿ ಮೌಲ್ಯದ ಬೈರಾಬಿ-ಸೈರಾಂಗ್ ಹೊಸ ರೈಲು ಮಾರ್ಗಕ್ಕೆ ಪ್ರಧಾನಿ ಹಸಿರು ನಿಶಾನೆ ತೋರಿದರು. ಮಿಜೋರಾಂ ಮತ್ತು ದೇಶದ ಇತರ ಭಾಗಗಳ ನಡುವಿನ ನೇರ ರೈಲು ಸಂಪರ್ಕವು ಈ ಪ್ರದೇಶದ ಜನರಿಗೆ ಸುರಕ್ಷಿತ, ಮತ್ತು ವೆಚ್ಚ-ಪರಿಣಾಮಕಾರಿ ಪ್ರಯಾಣದ ಆಯ್ಕೆಗಳನ್ನು ಕಲ್ಪಿಸುತ್ತದೆ. ಈ ವೇಳೆ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಇಂದು ದೇಶಕ್ಕೆ ಅದರಲ್ಲೂ ಮಿಜೋರಾಂ ಜನತೆಗೆ ಐತಿಹಾಸಿಕ ದಿನವಾಗಿದೆ. ಬೈರಾಬಿ-ಸೈರಾಂಗ್ ರೈಲು ಮಾರ್ಗವು ಮಿಜೋರಾಂನ ಜನರ ಜೀವನದಲ್ಲಿ ಕ್ರಾಂತಿಯನ್ನುಂಟು ಮಾಡುತ್ತದೆ ಎಂದು ಹೇಳಿದರು. ದುರ್ಗಮ ಭೂಪ್ರದೇಶ ಸೇರಿದಂತೆ ಹಲವಾರು ಸವಾಲುಗಳ ಹೊರತಾಗಿಯೂ, ಬೈರಾಬಿ-ಸೈರಾಂಗ್ ರೈಲು ಮಾರ್ಗ ಈಗ ವಾಸ್ತವವಾಗಿದೆ ಎಂದು ಅವರು ತಿಳಿಸಿದರು.

ಧ್ವನಿ: ಪ್ರಧಾನಿ (೩೭ ಸೆಕೆಂಡ್)

ಮೊದಲ ಬಾರಿಗೆ, ರಾಜಧಾನಿ ಎಕ್ಸ್ ಪ್ರೆಸ್ ಮೂಲಕ ಮಿಜೋರಾಂನ ಸೈರಾಂಗ್ ಅನ್ನು ನೇರವಾಗಿ ದೆಹಲಿಯೊಂದಿಗೆ ಸಂಪರ್ಕಿಸಲಾಗುತ್ತದೆ. ಹೊಸ ರೈಲು ಮಾರ್ಗದಿಂದ ಮಿಜೋರಾಂನ ರೈತರು ದೇಶಾದ್ಯಂತ ಹೊಸ ಮಾರುಕಟ್ಟೆಗಳನ್ನು ತಲುಪಲು ಸಾಧ್ಯವಾಗುತ್ತದೆ. ಈ ಅಭಿವೃದ್ಧಿಯು ಅನೇಕ ಕ್ಷೇತ್ರಗಳಲ್ಲಿ ಉದ್ಯೋಗಾವಕಾಶಗಳನ್ನು ಸೃಷ್ಟಿಸುತ್ತದೆ ಎಂದು ಪ್ರಧಾನಿ ಒತ್ತಿ ಹೇಳಿದರು.

><><><><><><><

ಮಿಜೋರಾಂ ಭೇಟಿಯ ನಂತರ ಪ್ರಧಾನಿ ನರೇಂದ್ರ ಮೋದಿ ಮಣಿಪುರದಲ್ಲಿ ೮ ಸಾವಿರದ ೫೦೦ ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ಹಲವು ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಮಣಿಪುರದ ಚುರಾಚಂದಪುರದಲ್ಲಿ ಮಧ್ಯಾಹ್ನ ೭ ಸಾವಿರದ ೩೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಯೋಜನೆಗಳಿಗೆ ಪ್ರಧಾನಿ ಚಾಲನೆ ನೀಡಲಿದ್ದಾರೆ. ಈ ಸಂದರ್ಭದಲ್ಲಿ ಅವರು ಸಾರ್ವಜನಿಕರನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ಬಳಿಕ ಪ್ರಧಾನಿ ಇಂಫಾಲದಲ್ಲಿ ಒಂದು ಸಾವಿರದ ೨೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ ಮತ್ತು ಸಾರ್ವಜನಿಕ ಸಮಾರಂಭವನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ. ಬಳೀಕ ಪ್ರಧಾನಿ ಅಸ್ಸಾಂಗೆ ಭೇಟಿ ನೀಡಲಿದ್ದುಸಂಜೆ ಗುವಾಹತಿಯಲ್ಲಿ ಭಾರತ ರತ್ನ ಡಾ. ಭೂಪೇನ್ ಹಜಾರಿಕಾ ಅವರ ೧೦೦ನೇ ಜನ್ಮ ವಾರ್ಷಿಕೋತ್ಸವದ ಆಚರಣೆಯಲ್ಲಿ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ ಪ್ರಧಾನಿ ಸಭಿಕರನ್ನುದ್ದೇಶಿಸಿ ಭಾಷಣ ಮಾಡಲಿದ್ದಾರೆ.

><><><><><><><

ಕರ್ನಾಟಕದ ಹಾಸನ ಜಿಲ್ಲೆಯಲ್ಲಿ ಗಣಪತಿ ವಿಸರ್ಜನೆಗಾಗಿ ಹೊರಟಿದ್ದ ಮೆರವಣಿಗೆಗೆ, ಟ್ಯಾಂಕರ್ ಲಾರಿಯೊಂದು ಡಿಕ್ಕಿ ಹೊಡೆದ ಪರಿಣಾಮ, ಕನಿಷ್ಠ ಒಂಬತ್ತು ಜನರು ಸಾವನ್ನಪ್ಪಿದ್ದು, ಹಲವರು ಗಾಯಗೊಂಡಿದ್ದಾರೆ. ಮೊಸಳೆ ಹೊಸಳ್ಳಿಯಲ್ಲಿ ಗಣಪತಿ ವಿಸರ್ಜನೆ ಮೆರವಣಿಗೆಗೆ, ಟ್ಯಾಂಕರ್ ಲಾರಿಯೊಂದು ಅಜಾಗರೂಕತೆಯಿಂದ ನುಗ್ಗಿದಾಗ ಈ ದುರ್ಘಟನೆ ಸಂಭವಿಸಿದೆ. ಈ ಘಟನೆಯಲ್ಲಿ ಒಂಬತ್ತು ಮಂದಿ ಸಾವನ್ನಪ್ಪಿದ್ದು, ಚಾಲಕ ಸೇರಿದಂತೆ ಹಲವರು ಗಾಯಗೊಂಡಿದ್ದಾರೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಬೋರಲಿಂಗಯ್ಯ ಸುದ್ದಿಗಾರರಿಗೆ ಮಾಹಿತಿ ನೀಡಿದ್ದಾರೆ. ಅಪಘಾತದಲ್ಲಿ ಆರು ಮಂದಿ ಗ್ರಾಮಸ್ಥರು ಮತ್ತು ಮೂವರು ಎಂಜಿನಿಯರಿಂಗ್ ವಿದ್ಯಾರ್ಥಿಗಳು ಸಾವನ್ನಪ್ಪಿದ್ದಾರೆ.

ಅಪಘಾತದ ಬಗ್ಗೆ ಪ್ರಧಾನಿ ನರೇಂದ್ರಮೋದಿ ಅವರು ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಪ್ರಧಾನಿ, ಅಪಘಾತದಲ್ಲಿ ಗಾಯಗೊಂಡವರು ಶೀಘ್ರವಾಗಿ ಚೇತರಿಸಿಕೊಳ್ಳಲಿ ಎಂದು ಹಾರೈಸಿದ್ದಾರೆ. ಪ್ರಧಾನ ಮಂತ್ರಿ ರಾಷ್ಟ್ರೀಯ ಪರಿಹಾರ ನಿಧಿಯಿಂದ, ಮೃತರ ಹತ್ತಿರದ ಸಂಬಂಧಿಕರಿಗೆ ೨ ಲಕ್ಷ ರೂಪಾಯಿ ಮತ್ತು ಗಾಯಾಳುಗಳಿಗೆ ೫೦ ಸಾವಿರ ರೂಪಾಯಿ ಪರಿಹಾರವನ್ನು ನೀಡಲಾಗುವುದು ಎಂದು ಪ್ರಧಾನಿ ಘೋಷಿಸಿದ್ದಾರೆ. ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಾವಿನ ಬಗ್ಗೆ ದುಃಖ ವ್ಯಕ್ತಪಡಿಸಿದ್ದು, ಮೃತರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ. ಮೃತರ ಕುಟುಂಬಸ್ಥರಿಗೆ ತಲಾ ೫ ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ.

><><><><><><><

ಸಾಮಾನ್ಯ ಜನರ ಜೀವನವನ್ನು ಸುಲಭಗೊಳಿಸಲು ಜಿಎಸ್ ಟಿ ಮಂಡಳಿ ಅನೇಕ ಗೃಹೋಪಯೋಗಿ ವಸ್ತುಗಳ ಮೇಲಿನ ತೆರಿಗೆ ದರಗಳನ್ನು ತಗ್ಗಿಸುವ ಮೂಲಕ ಸೆಪ್ಟೆಂಬರ್ ೨೨ರಂದು ಅವರ ಕನಸಗಳನ್ನು ಸಾಕಾರಗೊಳಿಸಿದೆ. ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳ ಅಡಿಯಲ್ಲಿ ಹಲವಾರು ಅಗತ್ಯ ವಸ್ತುಗಳನ್ನು ಜಿಎಸ್‌ಟಿ ಯಿಂದ ವಿನಾಯಿತಿ ನೀಡುವ ಮೂಲಕ ಸಾಮಾನ್ಯ ಜನರ ಮೇಲಿನ ಹೊರೆಯನ್ನು ಕಡಿಮೆ ಮಾಡಲು ಸರ್ಕಾರ ಮಹತ್ವದ ಕ್ರಮಗಳನ್ನು ಕೈಗೊಂಡಿದೆ. ಹೊಸ ರಚನೆಯಡಿಯಲ್ಲಿ, ತರಕಾರಿಗಳು, ಹಣ್ಣು, ಬೀಜಗಳು ಮತ್ತು ಜ್ಯೂಸ್ ಸೇರಿದಂತೆ ಗ್ರಾಹಕ ಸರಕುಗಳ ಮೇಲಿನ ತೆರೆಗೆಯನ್ನು ಶೇಕಡ ೧೨ರಿಂದ ಶೇಕಡ ೫ಕ್ಕೆ ಇಳಿಸಲಾಗಿದೆ. ನಮ್ಕೀನ್, ಭುಜಿಯಾ ಮತ್ತು ಮಿಶ್ರಣಗಳಂತಹ ತಿಂಡಿ ಪದಾರ್ಥಗಳನ್ನು ಹಿಂದಿನ ಶೇಕಡ ೧೨ರಷ್ಟು ತೆರಿಗೆ ದರದಿಂದ ಶೇಕಡಾ ೫ಕ್ಕೆ ಇಳಿಸಲಾಗಿದೆ. ಇದಲ್ಲದೆ, ಪ್ರಾಥಮಿಕವಾಗಿ ಸಕ್ಕರೆಯಿಂದ ತಯಾರಿಸಿದ ಉತ್ಪನ್ನಗಳ ಮೇಲಿನ ಹೊರೆಯನ್ನು ಕಡಿಮೆ ಮಾಡಲು ಕ್ಯಾಂಡಿಗಳು, ಟಾಫಿ, ಜೆಲ್ಲಿ ಸೇರಿದಂತೆ ಸಕ್ಕರೆ ಮಿಠಾಯಿ ಮೇಲಿನ ಜಿಎಸ್ ಟಿಯನ್ನು ಶೇಕಡ ೧೮ರಿಂದ ಶೇಕಡ ೫ಕ್ಕೆ ಇಳಿಸಲಾಗಿದೆ.

><><><><><><><

ನೇಪಾಳದಲ್ಲಿ ನಿವೃತ್ತ ನ್ಯಾಯಮೂರ್ತಿ ಸುಶೀಲಾ ಕಾರ್ಕಿ ಅವರ ನೇತೃತ್ವದಲ್ಲಿ ಹೊಸ ಮಧ್ಯಂತರ ಸರ್ಕಾರ ರಚನೆಯಾಗಿರುವುದನ್ನು ಭಾರತ ಸ್ವಾಗತಿಸಿದೆ. ಇದು ಆದೇಶದ ಶಾಂತಿ ಮತ್ತು ಸ್ಥಿರತೆಯನ್ನು ಕಾಪಾಡಿಕೊಳ್ಳಲು ನೆರವಾಗಲಿದೆ ಎಂದು ಭಾರತ ಭರವಸೆ ಹೊಂದಿದೆ ಎಂದು ವಿದೇಶಾಂಗ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ನಿಕಟ ನೆರೆಹೊರೆಯ ಸಹವರ್ತಿ ಪ್ರಜಾಪ್ರಭುತ್ವ ಮತ್ತು ದೀರ್ಘಕಾಲೀನ ಅಭಿವೃದ್ಧಿ ಪಾಲುದಾರನಾಗಿ, ಭಾರತ ಉಭಯ ದೇಶಗಳ ಜನರ ಯೋಗಕ್ಷೇಮ ಮತ್ತು ಸಂಮೃದ್ಧಿಗಾಗಿ ನೇಪಾಳದೊಂದಿಗೆ ನಿಕಟ ಸಂಬಂಧವನ್ನು ಮುಂದುವರಿಸುತ್ತದೆ ಎಂದು ಸಚಿವಾಲಯ ಹೇಳಿದೆ.

><><><><><><><

ನ್ಯಾಷನಲ್ ಪೇಮೆಂಟ್ಸ್ ಕಾರ್ಪೊರೇಷನ್ ಆಫ್ ಇಂಡಿಯಾ - ಎನ್‌ಪಿಸಿಐ, ವ್ಯಕ್ತಿಯಿಂದ ವ್ಯಾಪಾರಿ ವಹಿವಾಟುಗಳಿಗೆ ಏಕೀಕೃತ ಪಾವತಿ ಇಂಟರ್ಫೇಸ್ ಮಿತಿಯ ಕುರಿತು ಮಹತ್ವದ ಪರಿಷ್ಕರಣೆ ಮಾಡಿದೆ. ಹೊಸ ಪರಿಷ್ಕರಣೆಯು ಸೋಮವಾರದಿಂದ ಜಾರಿಗೆ ಬರಲಿದೆ. ಹೊಸ ಯುಪಿಐ ನಿಯಮಗಳನ್ನು ಭಾರತೀಯ ಬಳಕೆದಾರರಿಗೆ ಹೆಚ್ಚಿನ ಮೌಲ್ಯದ ಡಿಜಿಟಲ್ ಪಾವತಿಗಳನ್ನು ಸುಲಭ ಮತ್ತು ಹೆಚ್ಚು ಸುರಕ್ಷಿತವಾಗಿಸಲು ವಿನ್ಯಾಸಗೊಳಿಸಲಾಗಿದೆ ಎಂದು ಕಳೆದ ತಿಂಗಳು ಎನ್‌ಪಿಸಿಐ ಹೊರಡಿಸಿದ ಸುತ್ತೋಲೆಯಲ್ಲಿ ತಿಳಿಸಲಾಗಿದೆ.

><><><><><><><

ಕೇಂದ್ರ ಸರ್ಕಾರ ಜಿಎಸ್‌ಟಿ ದರಗಳನ್ನು ಕಡಿಮೆ ಮಾಡಿದ ಪರಿಣಾಮ ಪ್ರಸಕ್ತ ಹಣಕಾಸು ವರ್ಷದ ದ್ವಿತೀಯಾರ್ಧದಲ್ಲಿ, ಈ ವಾರ ಭಾರತೀಯ ಮಾನದಂಡದ ಷೇರುಗಳು ಏರಿಕೆ ಕಂಡಿವೆ. ಮುಂಬೈ ಷೇರು

ವಿನಿಮಯ ಸೂಚ್ಯಾಂಕ ನಿಫ್ಟಿ ಮತ್ತು ಸೆನ್ಸೆಕ್ಸ್ ಕ್ರಮವಾಗಿ ಸುಮಾರು ಶೇಕಡ ೧.೩೨ ಮತ್ತು ಶೇಕಡ ೧.೨೧ ರಷ್ಟು ಲಾಭದೊಂದಿಗೆ ವಾರದ ವಹಿವಾಟನ್ನು ಕೊನೆಗೊಳಿಸಿದವು. ಮಿಡ್‌ಕ್ಯಾಪ್ ಮತ್ತು ಸ್ಮಾಲ್‌ಕ್ಯಾಪ್ ಷೇರುಗಳು ಕೂಡ ಉತ್ತಮ ಪ್ರದರ್ಶನ ನೀಡಿದವು. ದೇಶೀಯ ಸಿಪಿಐ ಹಣದುಬ್ಬರ, ಸ್ವಲ್ಪ ಏರಿಕೆಯನ್ನು ದಾಖಲಿಸಿತು. ಜಾಗತಿಕ ವ್ಯಾಪಾರ ಉದ್ವಿಗ್ನತೆಯ ನಡುವೆ, ಹೆಚ್ಚಿನ ಬೇಡಿಕೆಯಿಂದಾಗಿ ಚಿನ್ನದ ದರ ಹೊಸ ಗರಿಷ್ಠ ಮಟ್ಟವನ್ನು ತಲುಪಿತು.

><><><><><><><

ಬಿಹಾರ, ಪಶ್ಚಿಮ ಬಂಗಾಳ, ಸಿಕ್ಕಿಂ, ತೆಲಂಗಾಣ, ಉತ್ತರಾಖಂಡ ಮತ್ತು ಈಶಾನ್ಯ ರಾಜ್ಯಗಳ ಪ್ರತ್ಯೇಕ ಸ್ಥಳಗಳಲ್ಲಿ ಇಂದು ಭಾರೀ ಮಳೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ದೆಹಲಿ, ಚಂಡೀಗಢ, ಹರಿಯಾಣ, ಕರ್ನಾಟಕದ ಕರಾವಳಿ ಮತ್ತು ಉತ್ತರ ಒಳನಾಡು, ಛತ್ತೀಸ್‌ಗಢ ಮತ್ತು ಒಡಿಶಾದಲ್ಲಿ ದಿನವಿಡೀ ಹಗುರದಿಂದ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ. ಮುಂದಿನ ೨-೩ ದಿನಗಳಲ್ಲಿ ಬಿಹಾರ, ಕರ್ನಾಟಕದ ಒಳನಾಡು, ಜಮ್ಮು ಮತ್ತು ಕಾಶ್ಮೀರ, ಲಡಾಖ್, ಜಾಖಂಡ್, ಒಡಿಶಾ, ತೆಲಂಗಾಣ ಮತ್ತು ಪಶ್ಚಿಮ ಬಂಗಾಳ ಮತ್ತು ಸಿಕ್ಕಿಂನಲ್ಲಿ ಗುಡುಗು ಸಹಿತ ಮತ್ತು ಮಿಂಚಿನ ಮಳೆಯಾಗುವ ಸಾಧ್ಯತೆಯಿದೆ ಎಂದು ಇಲಾಖೆ ತಿಳಿಸಿದೆ.

><><><><><><><

ಹಾಂಕಾಂಗ್‌ನಲ್ಲಿ ನಡೆಯುತ್ತಿರುವ ಹಾಂಕಾಂಗ್ ಬ್ಯಾಡ್ಮಿಂಟನ್ ಟೂರ್ನಿಯ ಪುರುಷರ ಡಬಲ್ಸ್ ವಿಭಾಗದಲ್ಲಿ ಭಾರತದ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಫೈನಲ್ ಪ್ರವೇಶಿಸಿದ್ದಾರೆ. ಭಾರತದ ಅಗ್ರಮಾನ್ಯ ಜೋಡಿ ಇಂದು ನಡೆದ ಪುರುಷರ ಡಬಲ್ಸ್ ವಿಭಾಗದ ಸೆಮಿಫೈನಲ್ ಪಂದ್ಯದಲ್ಲಿ ಚೈನೀಸ್ ತೈಪೆಯ ಚೆನ್ ಚೆಂಗ್ ಕ್ವಾನ್ ಮತ್ತು ಲಿನ್ ಬಿಂಗ್ ವೀ ವಿರುದ್ಧ ೨೧-೧೭, ೨೧-೧೫ ಗೇಮ್ ಗಳ ಅಂತರದಿಂದ ಜಯ ಗಳಿಸಿದೆ. ಸಂಜೆ ನಡೆಯಲಿರುವ ಪುರುಷರ ಸಿಂಗಲ್ಸ್ ವಿಭಾಗದ ಸೆಮಿಫೈನಲ್ ಪಂದ್ಯದಲ್ಲಿ ಭಾರತದ ಲಕ್ಷ್ಯ ಸೇನ್ ಚೈನೀಸ್ ತೈಪೆಯ ಚೌ ತೀನ್ ಚೆನ್ ವಿರುದ್ಧ ಸೆಣಸಲಿದ್ದಾರೆ.

><><><><>END<><><><